2051 (2528) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) :- ಮಾನ್ಯ ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ಗಡಿ ಪ್ರದೇಶದ ಚಾಮರಾಜನಗರ ಜಿಲ್ಲೆಯ ಸೇರಿದಂತೆ ರಾಜ್ಯಾದ್ಯಂತ ಇರುವ ನಿರುದ್ಯೋಗಿಗಳ ಸಂಖ್ಯೆ ಎಷ್ಟು;

ಆ) ನಿರುದ್ಯೋಗ ಸಮಸ್ಯೆಯನ್ನು ಹೋಗಲಾಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ನಿರುದ್ಯೋಗ ಪದವೀಧರರಿಗೆ ಸರ್ಕಾರದ ವತಿಯಿಂದ ಯಾವುದಾದರೂ ಸೌಲಭ್ಯವನ್ನು ಒದಗಿಸಲಾಗುವುದೇ;

ಈ) ಹಾಗಿದ್ದಲ್ಲಿ, ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗುವುದು;

ಉ) ಈ ಸೌಲಭ್ಯಗಳನ್ನು ಯಾವಾಗ ಜನರಿಗೆ ತರಲಾಗುವುದು?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು):

ಅ) 11,16,326. (ಜನವರಿ ಅಂತ್ಯಕ್ಕೆ)

ಆ) ಉದ್ಯೋಗಾಕಾಂಕ್ಷಿಗಳನ್ನು ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ನೋಂದಾಯಿಸಿಕೊಳ್ಳಲಾಗುತ್ತದೆ. ಉದ್ಯೋಗದಾತರು ಕೋರಿದಾಗ ನೋಂದಾಯಿತ ಅಭ್ಯರ್ಥಿಗಳ ಪಟ್ಟಿಯನ್ನು ನೀಡಲಾಗುತ್ತದೆ.

ಉದ್ಯೋಗ ಕಲ್ಪಿಸುವ ಯೋಜನೆಗಳು ಈ ಇಲಾಖೆಯಲ್ಲಿ ಇರುವುದಿಲ್ಲ.

ಇ) ಅಂತಹ ಕಾರ್ಯಕ್ರಮಗಳು ಈ ಇಲಾಖೆಯಲ್ಲಿ ಇಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

2053 (2525) ಶ್ರೀ ವಾಟಾಳ್ ನಾಗರಾಜ್ :- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯಾದ್ಯಂತ ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯಿಸಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು;

ಅ) ಈವರೆವಿಗೂ ವಿದ್ಯುತ್ ಸಂಪರ್ಕವನ್ನು ಒದಗಿಸದಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು;

ಇ) ಹಾಗಿದ್ದಲ್ಲಿ ಸದರಿ ಕೊಳವೆ ಬಾವಿಗಳಿಗೆ ಯಾವಾಗ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುವುದು;

ಈ) ಹಿಂದುಳಿದ ಗಡಿ ಪ್ರದೇಶ ಚಾಮರಾಜ ನಗರ ಜಿಲ್ಲೆಯಲ್ಲಿ 2006-07ನೇ ಸಾಲಿನಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ಮಂಜೂರಾತಿ ನೀಡಲಾಗಿದೆ?

ಶ್ರೀ ಬಾಲಚಂದ್ರ.ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) <u>ಡಾ॥ ಬಿ.ಆರ್. ಅಂಬೇಡ್ಕರ ಅಭಿವೃದ್ಧಿ ನಿಗಮ</u> :-

ಗಂಗಾ ಕಲ್ಯಾಣ ವೈಯಕ್ತಿಕ ಮತ್ತು ಸಾಮೂಹಿಕ ನೀರಾವರಿ ಕೊಳವೆಬಾವಿ ಯೋಜನೆಯಡಿ ನಿಗಮವು ಪ್ರಾರಂಭದಿಂದ ದಿ: 28-02-2007 ರವರೆಗೆ ಚಾಮರಾಜನಗರ ಜಿಲ್ಲೆಯಲ್ಲಿ ಒಟ್ಟು 1619 ಕೊಳವೆಬಾವಿಗಳನ್ನು ಕೊರೆಯಲಾಗಿದೆ.

ಚಾಮರಾಜನಗರ ಜಿಲ್ಲೆಯೂ ಸೇರಿದಂತೆ ರಾಜ್ಯಾದ್ಯಂತ ಗಂಗಾ ಕಲ್ಯಾಣ ಯೋಜನೆಯಡಿ ಒಟ್ಟು 45216 ಕೊಳವೆಬಾವಿಗಳನ್ನು ಕೊರೆಯಲಾಗಿದೆ.

<u>ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ</u> :-

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯ ಸಾಮೂಹಿಕ ಹಾಗೂ ವೈಯಕ್ತಿಕ ನೀರಾವರಿ ಯೋಜನೆಯಲ್ಲಿ, ಯೋಜನೆಯ ಪ್ರಾರಂಭದಿಂದ ಫೆಬ್ರವರಿ 2007ರ ವರೆಗೆ ಚಾಮರಾಜನಗರ ಜಿಲ್ಲೆಯು ಒಳಗೊಂಡಂತೆ ರಾಜ್ಯದಾದ್ಯಂತ ಕೊರೆದಿರುವ ಕೊಳವೆ ಬಾವಿಗಳ ವಿವರಗಳು ಈ ಮುಂದಿನಂತಿರುತ್ತದೆ.

ಸಾಮೂಹಿಕ ಯೋಜನೆ	2228
ವೈಯಕ್ತಿಕ ಯೋಜನೆ	3821

<u>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ</u> :-

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯಾದ್ಯಂತ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ

1997–98ನೇ ಸಾಲಿನಿಂದ 2005–06ನೇ ಸಾಲಿನವರೆವಿಗೆ ಒಟ್ಟಾರೆ 1144 ಸಾಮೂಹಿಕ ಹಾಗೂ 2276 ವೈಯಕ್ತಿಕ ಕೊಳವೆಬಾವಿಗಳನ್ನು ಕೊರೆಯಿಸಲಾಗಿದೆ.

ಆ) <u>ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ</u> :–

ಇವರೆವಿಗೂ ವಿದ್ಯುದ್ದೀಕರಣಕ್ಕೆ ಬಾಕಿ ಇರುವ ಒಟ್ಟು ಕೊಳವೆಬಾವಿಗಳ ಸಂಖ್ಯೆ 14099.

<u>ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ</u> :–

ಇವರೆವಿಗೂ ವಿದ್ಯುತ್ ಸಂಪರ್ಕ ಕಲ್ಪಿಸಿರುವ ಕೊಳವೆ ಬಾವಿಗಳ ವಿವರ ಈ ಮುಂದಿನಂತಿದೆ.

ಯೋಜನೆ	ಕೊರೆದ ಕೊ.ಬಾ ಗಳ ಸಂಖ್ಯೆ	ವಿದ್ಯುತ್ ಸಂಪರ್ಕ ಹೊಂದಿದ ಕೊ.ಬಾ ಗಳ ಸಂಖ್ಯೆ	ವಿದ್ಯುತ್ ಸಂಪರ್ಕ ಬಾಕಿ ಉಳಿದಿರುವ ಕೊ.ಬಾ.ಗಳ ಸಂ.
ಸಾಮೂಹಿಕ	2228	1467	761
ವೈಯಕ್ತಿಕ	3821	963	2858

<u>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ</u> :–

ಕರ್ನಾಟಕ ಅಲ್ಪಸಂಖ್ಯಾತರಿಗೆ ಅಭಿವೃದ್ಧಿ ನಿಗಮದಿಂದ 896 ಸಾಮೂಹಿಕ ಹಾಗೂ 969 ವೈಯಕ್ತಿಕ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗಿದೆ.

ಇ) <u>ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ</u> :–

ಸಾಮೂಹಿಕ ನೀರಾವರಿ ಯೋಜನೆಯಲ್ಲಿ ಕೊರೆದ ಕೊಳವೆ ಬಾವಿಗಳಿಗೆ ನಿಯಮಾನುಸಾರ ನಿಗಮದಿಂದಲೇ ವಿದ್ಯುತ್ ಠೇವಣಿ ಪಾವತಿಸಲಾಗುತ್ತದೆ. ಇದರಿಂದಾಗಿ, ಈ ಯೋಜನೆಯಲ್ಲಿ ಕೊರೆದ ಹೆಚ್ಚಿನ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಹೊಂದಿರುತ್ತವೆ.

<u>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ</u> :–

ಬಾಕಿ ಉಳಿದ ಕೊಳವೆಬಾವಿಗಳಿಗೆ ಕೆ.ಪಿ.ಟಿ.ಸಿ.ಎಲ್ ರವರಿಂದ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ವಿದ್ಯುದ್ದೀಕರಣದ ವೆಚ್ಚವನ್ನು ಫಲಾನುಭವಿಗಳ

ಭರಿಸಬೇಕಾಗಿತ್ತು. ಕೆಲವೊಂದು ಫಲಾನುಭವಿಗಳು ಬಹಳ ಕಷ್ಟದಲ್ಲಿದ್ದು ಇವರುಗಳು ವಿದ್ಯುದ್ದೀಕರಣ ವೆಚ್ಚವನ್ನು ಭರಿಸಲು ಸಾಧ್ಯವಿಲ್ಲವೆಂಬುದನ್ನು ಅರಿತು, ಸರ್ಕಾರವು ಫಲಾನುಭವಿಗಳು ಭರಿಸಬೇಕಾದ ಠೇವಣಿ ಮೊತ್ತವನ್ನು ಸರ್ಕಾರದಿಂದ ಭರಿಸಲು ಈ ನಿಗಮಕ್ಕೆ ರೂ.62.86 ಲಕ್ಷಗಳನ್ನು ಬಿಡುಗಡೆ ಮಾಡಿರುತ್ತಾರೆ. ಸದರಿ ಮೊತ್ತವನ್ನು ಕೆ.ಪಿ.ಟಿ.ಸಿ.ಎಲ್.ಗೆ ಬಿಡುಗಡೆ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆ.

ಈ) <u>ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ</u> :-

2006-07ನೇ ಸಾಲಿನಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ ಒಟ್ಟು 451 ಕೊಳವೆಬಾವಿಗಳನ್ನು ಕೊರೆಯಲು ಗುರಿ ನೀಡಲಾಗಿದ್ದು, ಅದರಂತೆ ಕಾರ್ಯ ಪ್ರಗತಿಯಲ್ಲಿದೆ.

<u>ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ :-</u>

2006-07ನೇ ಸಾಲಿಗೆ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಲ್ಲಿ ಚಾಮರಾಜನಗರ ಜಿಲ್ಲೆಗೆ ವೈಯಕ್ತಿಕ ನೀರಾವರಿ ಯೋಜನೆಯಲ್ಲಿ 67 ಕೊಳವೆ ಬಾವಿಗಳನ್ನು ಹಾಗೂ ಸಾಮೂಹಿಕ ಯೋಜನೆಯಲ್ಲಿ 8 ಘಟಕಗಳಲ್ಲಿ 16 ಕೊಳವೆ ಬಾವಿಗಳು ಸೇರಿ ಒಟ್ಟು 83 ಕೊಳವೆ ಬಾವಿಗಳಿಗೆ ಮಂಜೂರಾತಿ ನೀಡಲಾಗಿದೆ.

<u>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ</u> :-

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2006-07ನೇ ಸಾಲಿಗೆ ಚಾಮರಾಜನಗರ ಜಿಲ್ಲೆಗೆ 100 ಕೊಳವೆಬಾವಿಯನ್ನು ಕೊರೆಯಲು ಗುರಿಯನ್ನು ಹಮ್ಮಿಕೊಳ್ಳಲಾಗಿದೆ.

2054 (2524) ಶ್ರೀ ವಾಟಾಳ್ ನಾಗರಾಜ್ (ಚಾಮರಾಜ ನಗರ) :- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯೂ ಸೇರಿದಂತೆ ರಾಜ್ಯಾದ್ಯಂತ ಸ್ವಯಂ ಉದ್ಯೋಗ ಯೋಜನೆಯಡಿ ನೀಡಲಾಗುತ್ತಿರುವ ಸೌಲಭ್ಯಗಳೇನು;